ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ ಇವರ ನಿಯಮ 72 ರ ಅಡಿಯಲ್ಲಿನ ಗಮನ ಸೆಳೆಯುವ ಸೂಚನೆ ಸಂಖ್ಯೆ:61 ಗೆ ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರ ಉತ್ತರ.

ಪ್ರಶ್ನೆ:

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪಡಿತರ ಚೀಟಿಯಲ್ಲಿ ಹೆಸರು ಸೇರ್ಪಡೆ/ತಿದ್ದುಪಡಿ ಮಾಡಲು ಸಾವಿರಾರು ಅರ್ಜಿದಾರರು ಅರ್ಜಿ ಸಲ್ಲಿಸಿದ್ದು, ಚಾಲ್ತಿಯಲ್ಲಿರುವ ಪಡಿತರ ಚೀಟಿಗಳಲ್ಲಿ ಹೆಸರು ಸೇರ್ಪಡೆ/ತೆಗೆಯುವುದು, ವಿಳಾಸ ಬದಲಾವಣೆ, ಸದಸ್ಯರ ಹೆಸರು ತಿದ್ದುಪಡಿ ಸೇರಿದಂತೆ ಇನ್ನೂ ಮುಂತಾದ ತಿದ್ದುಪಡಿಗಳನ್ನು ಮಾಡುವಲ್ಲಿ ದೀರ್ಘ ಕಾಲದ ವಿಳಂಬವಾಗುತ್ತಿದೆ. ಸರ್ವರ್ ಸಮಸ್ಯೆ ಮತ್ತು ಇತರೆ ತಾಂತ್ರಿಕ ಕಾರಣಗಳನ್ನು ನೀಡಿ, ಪಡಿತರ ಚೀಟಿಗಳ ತಿದ್ದುಪಡಿ ಮಾಡುವಲ್ಲಿ ದೀರ್ಘ ಕಾಲದ ವಿಳಂಬವಾಗುತ್ತಿರುವುದರಿಂದ ಅರ್ಜಿದಾರರು ಸಕಾಲದಲ್ಲಿ ಸರ್ಕಾರದ ಯೋಜನೆ ಮತ್ತು ಸವಲತ್ತುಗಳ ಲಾಭ ಪಡೆಯುವುದರಿಂದ ವಂಚಿತರಾಗುತ್ತಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನವನ್ನು ಸೆಳೆಯಲು ಬಯಸುತ್ತೇನೆ.

ಉತ್ತರ:

ಪ್ರಸ್ತುತ NIC ವತಿಯಿಂದ ಆಹಾರ ತಂತ್ರಾಂಶವನ್ನು ನಿರ್ವಹಣೆ ಮಾಡುತ್ತಿದ್ದು, ಬೆಂಗಳೂರು ಮೈಸೂರು ಕಲಬುರ್ಗಿ ಪ್ರದೇಶಗಳಿಗೆ ಮೂರು ಸರ್ವರ್‌ಗಳನ್ನು ಬಳಸಲಾಗುತ್ತಿದೆ. General Service for Citizens (GSC) ಗೆ ಸಂಬಂಧಿಸಿದಂತೆ ಲಕ್ಷಾಂತರ ಅರ್ಜಿಗಳು ಬಂದಿದ್ದು, ಈ ಅರ್ಜಿಗಳ ವಿಲೇವಾರಿಗೆ ಸಂಬಂಧಿಸಿದಂತೆ ಹಾಲಿ ನಿರ್ವಹಿಸುತ್ತಿರುವ ಸರ್ವರ್‌ಗಳು ಹಳೆಯದಾಗಿರುವ ಕಾರಣ ಕಾರ್ಯದೊತ್ತಡದಿಂದ ಸರ್ವರ್‌ಗಳು ನಿಧಾನಗತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ. ಈ ಸಮಸ್ಯೆಯನ್ನು ನಿವಾರಿಸಲು NIC ವತಿಯಿಂದ Karnataka State Data Centre (KSDC) ಗೆ ಆಹಾರ ತಂತ್ರಾಂಶದ Migration ಕಾರ್ಯ ಪ್ರಗತಿಯಲ್ಲಿರುತ್ತದೆ. ಸದರಿ ಕಾರ್ಯವು ಪೂರ್ಣಗೊಂಡ ನಂತರ ಪಡಿತರ ಚೀಟಿಯಲ್ಲಿನ ಹೆಸರು ಸೇರ್ಪಡೆ/ ತಿದ್ದುಪಡಿ ಪ್ರಕ್ರಿಯೆಯು ನಿರಂತರವಾಗಿರುತ್ತದೆ.

ಆನಾಸ 269 ಡಿಆರ್‌ಎ 2023 (ಇ-ಆಫೀಸ್)

(ಕೆ.ಹೆಚ್.ಮುನಿಯಪ್ಪ)

ಆಹಾರ ನಾಗರಿಕ ಸರಬರಾಜು ಮತ್ತು

ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು

ಮಾಪನಶಾಸ್ತ್ರ ಇಲಾಖಾ ಸಚಿವರು